ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ.ಸಿ. ನಾಣಯ್ಯ (ಕಾನೂನು ಮತ್ತು ಸಂಸದೀಯ ಸಚಿವರು) : ಮಾನ್ಯ ಅಧ್ಯಕ್ಷರೇ, 28ನೇ ಪಟ್ಟಿಯಲ್ಲಿನ ಲಿಖಿತ ಮೂಲಕ ಉತ್ತರಿಸುವ 95 ಪ್ರಶ್ನೆಗಳ ಪೈಕಿ 85 ಪ್ರಶ್ನೆಗಳ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಹಿರಿಯ ಪ್ರಾಥಮಿಕ ಶಾಲೆಯಲ್ಲಿರುವ ಖಾಲಿ ಹುದ್ದೆಗಳು

2136 - ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯಾದ್ಯಾಂತ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಪದವೀಧರ ಮುಖ್ಯೋಪಾಧ್ಯಾಯರ ಹುದ್ದೆಗಳು ಎಷ್ಟು?

ಆ) ಸದರಿ ಹುದ್ದೆಗಳು ಎಷ್ಟು ಸಮಯದಿಂದ ಖಾಲಿ ಇವೆ?

ಇ) ಸದರಿ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಸರ್ಕಾರದ ಕ್ರಮವೇನು? ಹಾಗೂ ಎಷ್ಟು ಅವಧಿಯಲ್ಲಿ ಸದರಿ ಹುದ್ದೆಗಳನ್ನು ಭರ್ತಿ ಮಾಡುವ ಸಾಧ್ಯತೆ ಇದೆ?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) 855

ಆ) ಕಳೆದ ಎರಡು ವರ್ಷಗಳಿಂದ ಈ ಹುದ್ದೆಗಳು ಖಾಲಿ ಇವೆ.

ಇ) ಕರ್ನಾಟಕ ರಾಜ್ಯದ ಮಾನ್ಯ ಉಚ್ಛ ನ್ಯಾಯಾಲಯದ ತಡೆಯಾಜ್ಞೆ ಇರುವ ಕಾರಣ ಯಾವುದೇ ಕ್ರಮ ಕೈಗೊಳ್ಳಲು ಸಾಧ್ಯವಿಲ್ಲ. ನ್ಯಾಯಾಲಯದ ತಡೆಯಾಜ್ಞೆ ಆದೇಶ ತೆರವಾದ ನಂತರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಅಗತ್ಯ ಕ್ರಮ ತೆಗೆದುಕೊಳ್ಳಲಾಗುತ್ತದೆ.

ಅರೆಕಾಲಿಕ ಉಪನ್ಯಾಸಕರನ್ನು ಖಾಯಂಗೊಳಿಸುವುದು

2137 - ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅರೆಕಾಲಿಕ ಉಪನ್ಯಾಸಕರನ್ನು ಖಾಯಂಗೊಳಿಸುವ ಬಗ್ಗೆ ಸರ್ಕಾರವು ಈವರೆಗೆ ಕೈಗೊಂಡ ಕ್ರಮ ಏನು?